# Akashvani : Bangalore
# Regional Bulletin In Kannada
# 14.01.2026 / 18.40 hrs

## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ವಿಧಾನಸಭೆ, ವಿಧಾನ ಪರಿಷತ್‌ನ ಜಂಟಿ ಅಧಿವೇಶನ ಇದೇ ೨೨ ರಿಂದ ಆಯೋಜಿಸಲು ರಾಜ್ಯ ಸಚಿವ ಸಂಪುಟ ಸಭೆ ತೀರ್ಮಾನ

೨. ನ್ಯೂಜಿಲೆಂಡ್‌ನ ನಾವೀನ್ಯತೆ ಪರಿಸರ ವ್ಯವಸ್ಥೆಯ ನಿಯೋಗ ರಾಜ್ಯಕ್ಕೆ ಭೇಟಿ

೩. ಮಂಗಳೂರಿನಲ್ಲಿ ಇದೇ ೧೯ರಿಂದ ಕರಾವಳಿ ಚಲನಚಿತ್ರ ಉತ್ಸವ

೪. ಅಖಿಲ ಭಾರತ ಅಥ್ಲೆಟಿಕ್ ಚಾಂಪಿಯನ್‌ಶಿಪ್: ಮೂರನೇ ದಿನಂದು ಕರ್ನಾಟಕಕ್ಕೆ ಎರಡು ಚಿನ್ನ, ಒಂದು ಬೆಳ್ಳಿ

*****************

ರಾಜ್ಯ ವಿಧಾನಸಭೆ ಮತ್ತು ವಿಧಾನ ಪರಿಷತ್‌ನ ಜಂಟಿ ಅಧಿವೇಶನ ಇದೇ ೨೨ ರಿಂದ ಆಯೋಜಿಸಲು ರಾಜ್ಯ ಸಚಿವ ಸಂಪುಟ ಸಭೆ ತೀರ್ಮಾನಿಸಿದೆ ಎಂದು ರಾಜ್ಯ ಸಂಸದೀಯ ವ್ಯವಹಾರ ಸಚಿವ ಎಚ್.ಕೆ.ಪಾಟೀಲ್ ತಿಳಿಸಿದ್ದಾರೆ.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ನಡೆದ ವಿಶೇಷ ತುರ್ತು ಸಚಿವ ಸಂಪುಟ ಸಭೆಯ ನಿರ್ಣಯಗಳಿಗೆ ಸಂಬಂಧಿಸಿದಂತೆ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಇದೇ ೨೨ ರಂದು ವಿಧಾನ ಮಂಡಲದ ಅಧಿವೇಶನದ ಜಂಟಿ ಅಧಿವೇಶನ ಉದ್ದೇಶಿಸಿ ಭಾಷಣ ಮಾಡಲು ರಾಜ್ಯಪಾಲರನ್ನು ಆಹ್ವಾನಿಸಲು ಸಚಿವ ಸಂಪುಟ ತೀರ್ಮಾನಿಸಿದೆ ಎಂದು ಮಾಹಿತಿ ನೀಡಿದರು.

ವಿಕಸಿತ ಭಾರತ ಜಿ ರಾಮ್ ಜಿ ಕಾಯ್ದೆಯು ಸಮಾಜದ ಮೇಲೆ ಬೀರಿರುವ ಸಾಮಾಜಿಕ ಹಾಗೂ ಆರ್ಥಿಕ ಪರಿಣಾಮಗಳ ಬಗ್ಗೆ ಸಾರ್ವಜನಿಕರಿಗೆ ಅರಿವು ಹಾಗೂ ಜಾಗೃತಿ ಮೂಡಿಸಲು, ವಿಧಾನ ಮಂಡಲದ ಜಂಟಿ ಅಧಿವೇಶನದಲ್ಲಿ ವಿಶೇಷ ಚರ್ಚೆ ನಡೆಸಿ, ನೂತನ ಕಾಯ್ದೆಯ ಕುರಿತು ನಿರ್ಣಯ ಕೈಗೊಳ್ಳಲು ಸಚಿವ ಸಂಪುಟ ನಿರ್ಣಯಿಸಿದೆ ಎಂದು ಸಚಿವ ಎಚ್.ಕೆ.ಪಾಟೀಲ್ ತಿಳಿಸಿದರು.

*****************

ಪ್ರಧಾನಿ ನರೇಂದ್ರ ಮೋದಿ ಅವರು ನವದೆಹಲಿಯಲ್ಲಿಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ.ಎಲ್.ಮುರುಗನ್ ಅವರ ನಿವಾಸದಲ್ಲಿ ಪೊಂಗಲ್ ಆಚರಣೆಯಲ್ಲಿ ಭಾಗವಸಿದರು.

ಬಳಿಕ ಮಾತನಾಡಿದ ಅವರು, ಪೊಂಗಲ್ ಹಬ್ಬದ ವಿಶೇಷತೆ ಕುರಿತು ತಮ್ಮ ಅನಿಸಿಕೆ ಹಂಚಿಕೊಂಡರು. ಇದೇ ವೇಳೆ ಅವರು ಸುಸ್ಥಿರ ಕೃಷಿ ಮತ್ತು ನಿಸರ್ಗದ ರಕ್ಷಣೆಗೆ ಕರೆ ನೀಡಿದರು. ಮುಂದಿನ ಪೀಳಿಗೆಗಾಗಿ ನೀರು ಮತ್ತು ಮಣ್ಣನ್ನು ಉಳಿಸುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಅವರು ಹೇಳಿದರು.

ಸಾವಯವ ಕೃಷಿ ಮಾದರಿಯಿಂದ ಪರಿಸರದ ರಕ್ಷಣೆಯ ಜೊತೆಗೆ ಆರ್ಥಿಕವಾಗಿಯೂ ಸಬಲರಾಗಲು ಸಾಧ್ಯವಾಗಿದೆ ಎಂದು ರಾಜ್ಯದ ರೈತರಾದ ಮಲ್ಲಿಕಾರ್ಜುನ ತಮ್ಮ ಅನುಭವವನ್ನು ಆಕಾಶವಾಣಿಯೊಂದಿಗೆ ಹೊಂಚಿಕೊಂಡಿದ್ದಾರೆ.

*****************

ನ್ಯೂಜಿಲೆಂಡ್‌ನ ನಾವೀನ್ಯತೆ ಪರಿಸರ ವ್ಯವಸ್ಥೆಯ ನಿಯೋಗ ಇಂದು ರಾಜ್ಯ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಮತ್ತು ಇಲಾಖೆ ಅಧಿಕಾರಿಗಳನ್ನು ಭೇಟಿ ಮಾಡಿ, ತಂತ್ರಜ್ಞಾನ, ಶಿಕ್ಷಣ, ಸಂಶೋಧನೆ ಮತ್ತು ಉದಯೋನ್ಮುಖ ವಲಯಗಳಲ್ಲಿ ಸಹಯೋಗದ ಅವಕಾಶಗಳನ್ನು ಅನ್ವೇಷಿಸಿತು. ಜನರಿಂದ ಜನರಿಗೆ ಸಂಪರ್ಕಗಳನ್ನು ಬಲಪಡಿಸುವುದು ಹಾಗೂ ಕರ್ನಾಟಕ ಮತ್ತು ನ್ಯೂಜಿಲೆಂಡ್ ನಡುವೆ ದೀರ್ಘಕಾಲೀನ ಸಾಂಸ್ಥಿಕ ಸಂಪರ್ಕಗಳನ್ನು ಸ್ಥಾಪಿಸುವ ಕುರಿತು ಈ ಸಂವಾದ ಕೇಂದ್ರೀಕರಿಸಿತ್ತು.

ವಿಷ್ಯಾಕ್ಕಾಗಿ ಪ್ರಧಾನ ಮಂತ್ರಿಗಳ ವಿದ್ಯಾರ್ಥಿವೇತನ, ನ್ಯೂಜಿಲೆಂಡ್ ಸರ್ಕಾರದ ಅನುದಾನಿತ ಕಾರ್ಯಕ್ರಮವಾಗಿದ್ದು, ಇದು ನಾವೀನ್ಯತೆ, ಶಿಕ್ಷಣ ಮತ್ತು ನಾಯಕತ್ವದಲ್ಲಿ ಜಾಗತಿಕ ಸಾಮರ್ಥ್ಯಗಳನ್ನು ನಿರ್ಮಿಸುವಾಗ ವಿಷ್ಯಾದಾದ್ಯಂತ ಪಾಲುದಾರಿಕೆಗಳನ್ನು ಗಾಢವಾಗಿಸುವ ಗುರಿಯನ್ನು ಹೊಂದಿದೆ. ನಿಯೋಗವು ನ್ಯೂಜಿಲೆಂಡ್‌ನ ಸಂಶೋಧನೆ, ತಂತ್ರಜ್ಞಾನ, ಶಿಕ್ಷಣ ಮತ್ತು ನಾವೀನ್ಯತೆ ಪರಿಸರ ವ್ಯವಸ್ಥೆಯ ಪ್ರತಿನಿಧಿಗಳನ್ನು ಒಳಗೊಂಡಿತ್ತು ಎಂದು ಪ್ರಿಯಾಂಕ್ ಖರ್ಗೆ ಮಾಹಿತಿ ನೀಡಿದ್ದಾರೆ.

*****************

ಕರಾವಳಿ ಉತ್ಸವದ ಅಂಗವಾಗಿ ಇದೇ ೧೯ರಿಂದ ೨೧ರವರೆಗೆ ಮಂಗಳೂರಿನಲ್ಲಿ ತುಳು, ಕನ್ನಡ, ಕೊಂಕಣಿ ಹಾಗೂ ಬ್ಯಾರಿ ಭಾಷೆಗಳ ಕರಾವಳಿ ಚಲನಚಿತ್ರ ಉತ್ಸವವನ್ನು ಆಯೋಜಿಸಲಾಗಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ದರ್ಶನ್ ಎಚ್.ವಿ. ತಿಳಿಸಿದ್ದಾರೆ.

ಮಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದ ಭಾರತ್ ಸಿನೆಮಾಸ್‌ನಲ್ಲಿ ಒಟ್ಟು ೧೮ ಸಿನೆಮಾಗಳು ಪ್ರದರ್ಶನಗೊಳ್ಳಲಿದ್ದು, ಸ್ಥಳೀಯ ಭಾಷೆಗಳ ಬೆಳವಣಿಗೆಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಈ ಬಾರಿ ೧೧ ತುಳು ಸಿನೆಮಾಗಳು ಪ್ರದರ್ಶನಗೊಳ್ಳಲಿವೆ ಎಂದರು.

ಜಿಲ್ಲಾ ಪಂಚಾಯತ್ ಹಾಗೂ ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ಸಹಯೋಗದಲ್ಲಿ ಲಾಲ್‌ಬಾಗ್‌ನ ಕರಾವಳಿ ಉತ್ಸವ ಮೈದಾನದಲ್ಲಿ ಇದೇ ೨೫ರಂದು ಮಧ್ಯಾಹ್ನ ೨ ಗಂಟೆಗೆ ಕುಡ್ಲ ಶ್ವಾನ ಪ್ರದರ್ಶನವನ್ನು ಆಯೋಜಿಸಲಾಗಿದೆ. ವಿವಿಧ ಜಿಲ್ಲೆಗಳಿಂದ ಸುಮಾರು ೨೫ ವಿವಿಧ ತಳಿಯ ೩೦೦ ಶ್ವಾನಗಳು ಪ್ರದರ್ಶನದಲ್ಲಿ ಭಾಗವಹಿಸುವ ನಿರೀಕ್ಷೆ ಇದೆ ಎಂದು ಅವರು ಹೇಳಿದರು.

*****************

ಚಿಕ್ಕಮಗಳೂರು ಜಿಲ್ಲೆಯ ಹಲವೆಡೆ ಇಂದು ಕೂಡ ಮಳೆಯಾಗಿದೆ. ಚಿಕ್ಕಮಗಳೂರು ನಗರ ಸೇರಿದಂತೆ ಜಿಲ್ಲೆಯ ಮಲೆನಾಡು ಹಾಗೂ ಗಿರಿ ಪ್ರದೇಶದಲ್ಲಿ ಸಾಧಾರಣ ಮಳೆಯಾಗುತ್ತಿದೆ. ಅಕಾಲಿಕ ಮಳೆಯಿಂದಾಗಿ ಜಿಲ್ಲೆಯಲ್ಲಿ ಕೃಷಿ ಚಟುವಟಿಕೆಗಳಿಗೆ ಸಮಸ್ಯೆ ಉಂಟಾಗಿದೆ. ನಿನ್ನೆ ಕೂಡ ಮೂಡಿಗೆರೆ, ಕಳಸ, ಬಾಳೆಹೊನ್ನೂರು ಸುತ್ತಮುತ್ತ ಮಳೆಯಾಗಿದ್ದು, ಹಲವೆಡೆ ಒಣ ಹಾಕಿದ ಕಾಫಿ ಬೆಳೆಗಳು ಕೊಚ್ಚಿಹೋಗಿವೆ. ಹೆಚ್ಚು ಮಳೆಯಾದರೆ ಗಿಡದಲ್ಲಿರುವ ಕಾಫಿ ಉದುರುವುದಲ್ಲದೆ, ಕೊಯ್ಲು ಮಾಡಿದ ಕಾಫಿ ಒಣಗಿಸಲು ಸಮಸ್ಯೆ ಉಂಟಾಗುತ್ತದೆ ಎಂದು ರೈತರು ಆತಂಕ ವ್ಯಕ್ತಪಡಿಸಿದ್ದಾರೆ.

*****************

ದಕ್ಷಿಣ ಕನ್ನಡ ಜಿಲ್ಲೆಯ ಮೂಡುಬಿದಿರೆಯ ಸ್ವರಾಜ್ ಮೈದಾನದಲ್ಲಿ ನಡೆಯುತ್ತಿರುವ ೮೫ನೇ ಅಖಿಲ ಭಾರತ ಅಥ್ಲೆಟಿಕ್ ಚಾಂಪಿಯನ್‌ಶಿಪ್ ಇಂದು ಮೂರನೇ ದಿನಕ್ಕೆ ಕಾಲಿಟ್ಟಿದ್ದು, ಕರ್ನಾಟಕ ತಂಡ ಉತ್ತಮ ಸಾಧನೆ ತೋರಿದೆ.

ಮೂರನೇ ದಿನದ ಸ್ಪರ್ಧೆಗಳಲ್ಲಿ ಕರ್ನಾಟಕ ಎರಡು ಚಿನ್ನ ಮತ್ತು ಒಂದು ಬೆಳ್ಳಿ ಪದಕಗಳನ್ನು ತನ್ನದಾಗಿಸಿಕೊಂಡಿದೆ. ಡಿಸ್ಕಸ್ ತ್ರೋ ವಿಭಾಗದಲ್ಲಿ ಮಂಗಳೂರು ವಿಶ್ವವಿದ್ಯಾನಿಲಯವನ್ನು ಪ್ರತಿನಿಧಿಸಿದ ಚಮನ್ ಜ್ಯೋತ್ ಸಿಂಗ್ ಚಿನ್ನದ ಪದಕ ಗೆದ್ದು ಗಮನಸೆಳೆದರು. ಬೆಂಗಳೂರು ಜೈನ್ ವಿಶ್ವವಿದ್ಯಾಲಯದ ಹರೀಶ್ ಬೆಳ್ಳಿ ಪದಕ ಪಡೆದುಕೊಂಡರೆ, ಮದ್ರಾಸ್ ವಿಶ್ವವಿದ್ಯಾಲಯದ ಮನೋಜ್ ಕುಮಾರ್ ಆರ್. ಕಂಚಿನ ಪದಕಕ್ಕೆ ಪಾತ್ರರಾದರು.

ಮಹಿಳಾ ಹಾಫ್ ಮ್ಯಾರಥಾನ್ ಸ್ಪರ್ಧೆಯಲ್ಲಿ ಮಂಗಳೂರು ವಿಶ್ವವಿದ್ಯಾಲಯದ ಕೆ.ಎಂ.ಭಾಗೀರಥಿ ಪ್ರಥಮ ಸ್ಥಾನ ಪಡೆದು ಚಿನ್ನಕ್ಕೆ ಮುತ್ತಿಕ್ಕಿದರು. ಸೋಹನ್ ಸಿಂಗ್ ಜೀನಾ ವಿಶ್ವವಿದ್ಯಾಲಯದ ಮಾಯಾ ಬೆಳ್ಳಿ, ಸಿ.ಎಚ್.ಚೌಧರಿ ಚರಣ್ ವಿಶ್ವವಿದ್ಯಾಲಯದ ಗಂಗಾ ಕಂಚಿನ ಪದಕ ಪಡೆದರು.

ಪುರುಷರ ೨೦ ಕಿಲೋ ಮೀಟರ್ ಹಾಫ್ ಮ್ಯಾರಥಾನ್ ಫೈನಲ್‌ನಲ್ಲಿ ಲಕ್ನೋ ವಿಶ್ವವಿದ್ಯಾಲಯದ ರವಿಕುಮಾರ್ ಪಾಲ್ ಚಿನ್ನದ ಪದಕ ಗೆದ್ದು ಬೀಗಿದರು. ಶಿವಾಜಿ ವಿಶ್ವವಿದ್ಯಾಲಯದ ಕಂಬ್ಳೆ ಪ್ರವೀಣ್ ಬಾಬನ್ ಬೆಳ್ಳಿ ಪದಕ ಪಡೆದುಕೊಂಡರೆ, ವೀರ್ ಬಹಾದ್ದೂರ್ ಸಿಂಗ್ ವಿಶ್ವವಿದ್ಯಾಲಯದ ಸತೀಶ್ ಕುಮಾರ್ ವರ್ಮಾ ಕಂಚಿನ ಪದಕ ಗಳಿಸಿದರು.

ಮಹಿಳೆಯರ ೧೧೦ ಮೀಟರ್ ಡೆಕತ್ಲಾನ್ ಸ್ಪರ್ಧೆಯಲ್ಲಿ ಭಾರತಿಪುರ್ ವಿಶ್ವವಿದ್ಯಾಲಯದ ವೇತಪ್ರಿಯಮ್ ಕೆ ಚಿನ್ನ ಗೆದ್ದುಕೊಂಡರು. ಕೊಟ್ಟ ಎಂ.ಜಿ.ವಿಶ್ವವಿದ್ಯಾಲಯದ ಅಂಜಲ್ ದೀಪ್ ಟಿ ಬೆಳ್ಳಿ, ಮುಂಬೈ ವಿಶ್ವವಿದ್ಯಾಲಯದ ರಾಮೇಶ್ವರ್ ಮಹದಿಕ್ ಕಂಚಿನ ಪದಕ ಪಡೆದುಕೊಂಡರು.

ಇನ್ನು, ಮಹಿಳೆಯರ ಹೆಪತ್ಲಾನ್ ೧೦೦ ಮೀಟರ್ ಹರ್ಡಲ್ಸ್ ವಿಭಾಗದಲ್ಲಿ ಅದಮಾಸ್ ವಿಶ್ವವಿದ್ಯಾಲಯದ ಬಿದಿಶಾ ಕುಂಡು ಚಿನ್ನದ ಪದಕ ಜಯಿಸಿದರು. ಕಳಿಂಗ ವಿಶ್ವವಿದ್ಯಾಲಯದ ಇಶಾ ನೇಗಿ ಬೆಳ್ಳಿ ಮತ್ತು ಮದ್ರಾಸ್ ವಿಶ್ವವಿದ್ಯಾಲಯದ ದೀಪ್ತಿಕಾ ಎಸ್ ಕಂಚಿನ ಪದಕಕ್ಕೆ ಪಾತ್ರರಾದರು.

*****************

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಶಿವಯೋಗಿ ಸಿದ್ದರಾಮೇಶ್ವರ ಜಯಂತಿಯನ್ನು ಆಚರಿಸಲಾಯಿತು.

ಶಾಸಕ ಧೀರಜ್ ಮುನಿರಾಜು ಮಾತನಾಡಿ, ಸಿದ್ದರಾಮೇಶ್ವರರು ಶ್ರಮಿಕ ವರ್ಗದಲ್ಲಿ ಜನಿಸಿ, ೧೨ನೇ ಶತಮಾನದಲ್ಲೇ ಕೆರೆ-ಕುಂಟೆಗಳನ್ನು ಕಟ್ಟಿಸುವ ಮೂಲಕ ಜನೋಪಯೋಗಿ ಕೆಲಸಗಳ ಮೂಲಕ ವಚನಕಾರರಲ್ಲೇ ಭಿನ್ನವಾಗಿ ಗುರುತಿಸಿಕೊಂಡರು. ಅವರ ಸಮಾಜ ಸೇವೆ ಅನುಕರಣೀಯ ಎಂದು ಸ್ಮರಿಸಿದರು.
ಕಾರ್ಯಕ್ರಮದಲ್ಲಿ ತಹಸೀಲ್ದಾರ್ ಮಲ್ಲಪ್ಪ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

*****************

ಸಕಲೇಶಪುರ ತಾಲೂಕಿನ ಬೆಳಗೋಡು ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷೆ ರಾಜಮ್ಮ ಅವರ ಪುತ್ರಿ ಶೋಭಾ ಅವರು ಕಾಡಾನೆ ದಾಳಿಯಿಂದ ಅಕಾಲಿಕ ಮರಣಕ್ಕೀಡಾದ ಹಿನ್ನೆಲೆಯಲ್ಲಿ, ಹಾಸನ ಸಂಸದ ಶ್ರೇಯಸ್ ಪಟೇಲ್ ಅವರು ಇಂದು ಮೃತರ ನಿವಾಸಕ್ಕೆ ಭೇಟಿ ನೀಡಿದರು.

ಹಾಸನ ತಾಲೂಕಿನ ಕಟ್ಟಾಯ ಹೋಬಳಿಯ ಸತ್ತಿಗರಹಳ್ಳಿ ಗ್ರಾಮದಲ್ಲಿ ಇರಿಸಲಾಗಿದ್ದ ಶೋಭಾ ಅವರ ಪಾರ್ಥಿವ ಶರೀರಕ್ಕೆ ಸಂಸದರು ಅಂತಿಮ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಶೋಭಾ ಅವರ ಪತಿ ನಾಗರಾಜ್ ಮತ್ತು ತಾಯಿ ರಾಜಮ್ಮ ಅವರಿಗೆ ಸಾಂತ್ವನ ಹೇಳಿದ ಸಂಸದರು, ವೈಯಕ್ತಿಕವಾಗಿ ೫೦ ಸಾವಿರ ರೂಪಾಯಿಗಳ ಆರ್ಥಿಕ ನೆರವನ್ನು ಹಸ್ತಾಂತರಿಸಿದರು.

********ಮುಕ್ತಾಯ*********